**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.**

ಸಿ.ಸಿ. ನಂ.188/2022

ಸಿಡಬ್ಲೂ: 02 ಪಿಡಬ್ಲ್ಯೂ : 02

ಪ್ರಮಾಣವಚನ ಭೋಧಿಸಲಾಯಿತು. ದಿಃ 18.01.2025.

ಹೆಸರು : ಶ್ರೀ. ಸಿದ್ದರಾಮ

ತಂ/ಗಂ ಹೆಸರು : ಶ್ರೀ. ಶರಣಪ್ಪ

ವಯಸ್ಸು : 38 ವರ್ಷ

ಉದ್ಯೊಗ : ಕೂಲಿ ಕೆಲಸ.

ವಾಸಸ್ಥಳ : ಮಾದನಹಿಪ್ಪರಗಾ.

---

**ಮುಖ್ಯ ವಿಚಾರಣೆ: ಶ್ರೀ. ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ**

ನ್ಯಾಯಾಲಯದ ಮುಂದಿರುವ 1 ಮತ್ತು 2ನೇ ಆರೋಪಿಗಳ ಪರಿಚಯ ಇರುವುದಿಲ್ಲ. ಅದೇ ರೀತಿ ಉಳಿದ ಆರೋಪಿಗಳು ಕೂಡಾ ನನಗೆ ಪರಿಚಯ ಇರುವುದಿಲ್ಲ. 2 ಮತ್ತು 8ನೇ ಆರೋಪಿಗಳು ಗೈರು ಹಾಜರಾಗಿದ್ದು, ಅವರ ಪರ ವಕೀಲರು ವಿನಾಯಿತಿ ಅರ್ಜಿ ಸಲ್ಲಿಸಿದ್ದು, ಗುರುತಿಸುವಿಕೆ ಬಗ್ಗೆ ಯಾವುದೇ ತಕರಾರು ಇರುವುದಿಲ್ಲ ಎಂದು ಹೇಳಿರುತ್ತಾರೆ. ಸಾಕ್ಷಿಗೆ ತಮ್ಮ ಸಹಿ ಇರುವ ದಾಖಲೆಯನ್ನು ತೋರಿಸಲಾಗಿ, ಸಾಕ್ಷಿಯು ದಾಖಲೆಯಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದು ಜಪ್ತಿ ಪಂಚನಾಮೆಯಾಗಿದ್ದು, ಅದನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ನಿಪಿ-1ರಲ್ಲಿನ ಸಹಿಯನ್ನು ಸುಮಾರು 8-10 ವರ್ಷಗಳ ಹಿಂದೆ ಮಾದನಹಿಪ್ಪರಗಾ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಷಯವಾಗಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಸದರಿ ನಿಪಿ-1 ದಾಖಲೆಯನ್ನು ಓದಿ ನೋಡಿಲ್ಲ ಹಾಗೂ ಪೊಲೀಸರು ನನಗೆ ಓದಿ ಹೇಳಿಲ್ಲ. ನನ್ನ ಜೊತೆ ನಿಪಿ-1ಕ್ಕೆ ಸಹಿ ಮಾಡುವ ಕಾಲಕ್ಕೆ ಬೇರೆ ಯಾರು ಇರಲಿಲ್ಲ, ಪೊಲೀಸರು ಇದ್ದರು. ನನ್ನ ಸಮಕ್ಷಮ ಯಾವುದೇ ವಾಹನಗಳನ್ನು ವಶಪಡಿಸಿಕೊಂಡಿರುವುದಿಲ್ಲ. ಈ ಪ್ರಕಣದಲ್ಲಿ ನನಗೆ ಯಾವುದೇ ಮಾಹಿತಿ

ಇರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ ವಾದ ಕೇಳಿ ದಾಖಲಾತಿಗಳನ್ನು ಪರಿಶೀಲಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ</u>** <u>ಶ್ರೀ. ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ದಿಃ 30.10.2015 ರಂದು ಬೆಳಿಗ್ಗೆ 4.45 ರಿಂದ 6.30 ಗಂಟೆಯವರೆಗೂ ಪೊಲೀಸರು ನನ್ನ ಹಾಗೂ ಚಾಸಾ-3 ರವರ ಸಮಕ್ಷಮ, ಆರೋಪಿಗಳ ಅಕ್ರಮವಾಗಿ ಮರಳನ್ನು ಕಳ್ಳತನ ಮಾಡಿ ಸಾಗಾಣಿಕೆ ಮಾಡಿದ ಆಪಾದನೆ ಮೇರೆಗೆ ಜಪ್ತಿ ಪಂಚನಾಮೆಯನ್ನು ಬರೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ರೀತಿ ನಮ್ಮಗಳ ಸಮಕ್ಷಮ ಜೆಸಿಬಿ ಮತ್ತು ಲಾರಿಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಜಪ್ತಿಪಂಚನಾಮೆಯನ್ನು ಬರೆದಿದ್ದು, ಅದನ್ನು ನನಗೆ ಮತ್ತು ಚಾಸಾ-3 ರವರಿಗೆ ಓದಿ ಹೇಳಿರುತ್ತಾರೆ ಎಂದರೆ ಸರಿಯಲ್ಲ. ಜಪ್ತಿ ಪಂಚನಾಮೆಯಲ್ಲಿಯ ಎಲ್ಲ ವಿಷಯಗಳು ನನಗೆ ಗೊತ್ತಿದ್ದರೂ ಕೂಡಾ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u>** <u>ಆರೋಪಿಗಳ ಪರ ವಕೀಲರಿಂದಃ</u>

ಆರೋಪಿಗಳ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ಮಂಡಿಸಿರುತ್ತಾರೆ.

**<u>ಮರು ವಿಚಾರಣೆಃ</u>** <u>ಇರುವುದಿಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಜೆ.ಎಂ.ಎಫ್.ಸಿ, ನ್ಯಾಯಾಲಯ, ಆಳಂದ.